ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರವರ ಕಛೇರಿ, ರಾಜರಾಜೇಶ್ವರಿನಗರ ವಲಯ, ಬೆಂಗಳೂರು–98

ಸಂಖ್ಯೆ.ಮುಅ/ರಾ.ರಾ.ನ/ತಾ.ಮಂ/ 68 /2022–23 ದಿನಾಂಕ: 08.07.2022

"ತಾಂತ್ರಿಕ ಮಂಜೂರಾತಿ ಪತ್ರ"

ವಿಷಯ :– **Comprehensive Development of Roads & Drains in J.P.Park, Yeshawanthapura, Jalahalli and Surrounding areas in Ward No.16, 17 and 37 under PACKAGE (15) - 2022-23 RRN-DIV**.ರ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ :– ಕಾರ್ಯಪಾಲಕ ಅಭಿಯಂತರರು (ರಾರಾನಗರ) ರವರ ಟಿಪ್ಪಣಿ ವರದಿಯಲ್ಲಿ ಆಡಳಿತಾತ್ಮಕ ಮಂಜೂರಾತಿ ನಿರೀಕ್ಷಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲು ಕೋರಿರುವ ಪ್ರಸ್ತಾವನೆ ವರದಿ.

ಪ್ರಸ್ತಾವನೆ:–

ಕಾರ್ಯಪಾಲಕ ಅಭಿಯಂತರರು(ರಾರಾನಗರ) ವಿಭಾಗ ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಪಟ್ಟಿಯನ್ನು **ರೂ.1100.00 ಲಕ್ಷಗಳ** ಮೊತ್ತಕ್ಕೆ ತಯಾರಿಸಿ, ಉಲ್ಲೇಖ(1)ರಂತೆ ಆಡಳಿತಾತ್ಮಕ ಅನುಮೋದನೆ ನಿರೀಕ್ಷಿಸಿ, ತಾಂತ್ರಿಕ ಮಂಜೂರಾತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಕಾರ್ಯಪಾಲಕ ಅಭಿಯಂತರರು(ರಾರಾನಗರ) ವಿಭಾಗ ರವರ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

"Comprehensive Development of Roads & Drains in J.P.Park, Yeshawanthapura, Jalahalli and Surrounding areas in Ward No.16, 17 and 37 under PACKAGE (15) - 2022-23 RRN-DIV" ರ ಕಾಮಗಾರಿಯ ಅಂದಾಜು ಮೊತ್ತ **ರೂ.1100.00 ಲಕ್ಷಗಳ** ಮೊತ್ತಕ್ಕೆ ಮಾನ್ಯ ಮುಖ್ಯ ಮಂತ್ರಿಗಳ "ಅಮೃತ ನಗರೋತ್ಥಾನ" ಯೋಜನೆಯಡಿ ಮೀಸಲಿಟ್ಟಿರುವ ಅನುದಾನದಡಿಯಲ್ಲಿ ಕಾಮಗಾರಿಗೆ ಜಾಬ್‌ಸಂಖ್ಯೆ ನಿರೀಕ್ಷಿಸಿ ಸದರಿ ಅಂದಾಜು ಪಟ್ಟಿಗೆ ಈ ಕಛೇರಿಯ ತಾಂತ್ರಿಕ ಮಂಜೂರಾತಿ ದಾಖಲಾತಿಯ ವಹಿಯ **ಕ್ರಮ ಸಂಖ್ಯೆ : 68** ಮತ್ತು **ಪುಟ ಸಂಖ್ಯೆ: 22–23** ರಲ್ಲಿ ನೊಂದಾಯಿಸಿ **ರೂ.9,13,50,491/–(ರೂ.ಒಂಬತ್ತು ಕೋಟಿ ಹದಿಮೂರು ಲಕ್ಷದ ಐವತ್ತು ಸಾವಿರದ ನಾಲ್ಕು ನೂರ ತೊಂಬತ್ತೊಂದು ಮಾತ್ರ)**ಗಳಿಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ.

ಷರತ್ತುಗಳು :–

1. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ಪ್ರಕಾರ ಕಾಮಗಾರಿಯ ಟೆಂಡರ್ ಕರೆಯುವಲ್ಲಿ ಸೂಕ್ತ ಕ್ರಮ ಅನುಸರಿಸತಕ್ಕದ್ದು.
2. ಅಂದಾಜುಪಟ್ಟಿಯ ಮೊತ್ತವು ಮಂಜೂರಾತಿಯಾದ ಮೊತ್ತಕ್ಕಿಂತ ಮೀರಬಾರದು, ಹಾಗೂ ಕಾಮಗಾರಿಗೆ ಮಂಜೂರಾದ ಮೊತ್ತದ ಹಣವನ್ನು ಅದೇ ಕಾಮಗಾರಿಗೆ ಉಪಯೋಗಿಸತಕ್ಕದ್ದು.
3. ಕಾಮಗಾರಿಯನ್ನು ಐ.ಆರ್.ಸಿ/ಐ.ಎಸ್. ಮಾರ್ಗ ಸೂಚಿಗಳಂತೆ, ಮತ್ತು ನಿಗಧಿತ ವಿಶಿಷ್ಟ ವಿವರಣೆಯ (Standard Specification) ಪ್ರಕಾರ ನಿರ್ವಹಿಸತಕ್ಕದ್ದು.
4. ಕಾಮಗಾರಿ ಪೂರ್ಣಗೊಂಡ ನಂತರ ನಿಗಧಿತ ಅವಧಿಯೊಳಗೆ ಯುಟಿಲೈಜೇಷನ್ ಪ್ರಮಾಣ ಪತ್ರ ಹಾಗೂ ಕಾಮಗಾರಿ ಪೂರ್ಣಗೊಂಡ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
5. ಮಂಜೂರಾದ ಕಾಮಗಾರಿಯಲ್ಲಿ ಯಾವುದೇ ಬದಲಾವಣೆ ಅಥವಾ ಮಾರ್ಪಾಡು ಆಗಿದ್ದಲ್ಲಿ ಅನುಷ್ಠಾನ ಅಧಿಕಾರಿಗಳೇ ಜವಾಬ್ದಾರರಾಗಿರುತ್ತಾರೆ ನಿಗದಿಯಾದ ದರಪಟ್ಟಿಯಲ್ಲಿಲ್ಲದ ದರಗಳಿಗೆ (Data Rate) ಮತ್ತು ದರಗಳ ವಿವರಗಳಿಗೆ (Rate Analysis) ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯ ತಕ್ಕದ್ದು.

ಪು.ತಿ.ನೋ.....

Scanned with CamScanner

6. ಪ್ರಸುತ್ತ ಉದ್ದೇಶಿಸಿರುವ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವುದಕ್ಕೆ ಪೂರಕವಾಗಿ ಈ ... ಕಾಮಗಾರಿಗಳ ನಿರ್ವಹಣೆ ಅಂಶಗಳ ವಿವರಗಳನ್ನು ರಸ್ತೆ ಇತಿಹಾಸ (Road History) ... ಕಾಮಗಾರಿಯ ವಿವರಗಳನ್ನು ನಮೂದಿಸಿ ನಿರ್ವಹಿಸಿರುವುದರ ಬಗ್ಗೆ.
7. ಅಂದಾಜು ಪಟ್ಟಿಯಲ್ಲಿ ಅಳವಡಿಸಿರುವ ಇಡಗಂಟು ರೂಪದಲ್ಲಿ ಒದಗಿಸಲಾಗಿರುವ ... Provisions) ಮೊತ್ತಗಳಿಗೆ ಉಪಅಂದಾಜನ್ನು ತಯಾರಿಸಿ ಅನುಮೋದನೆ ಪಡೆಯ ತಕ್ಕದ್ದು.
8. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸುವಾಗ Stander Tender Document KW - 1/2/3/4 ... ಆಗಿಂದಾಗ್ಗೆ ಹೊರಡಿಸುವ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಟೆಂಡರ್ ಆಹ್ವಾನಿಸತಕ್ಕದ್ದು.
9. ತೆರವುಗೊಳಿಸಿರುವ ಉಪಯುಕ್ತ ಸಾಮಾಗ್ರಿಗಳ ಬಗ್ಗೆ **MAS** ನ ವಹಿಯಲ್ಲಿ ದಾಖಲಿಸುವುದು ಹಾಗೂ ... ತರಹದ ಉಪಯುಕ್ತ ಸಾಮಾಗ್ರಿಗಳನ್ನು ಬೇರೆಡೆ ಉಪಯೋಗಿಸಿರುವ (ಮರು ಬಳಿಕೆ ಮಾಡಿರುವ) ... ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ದೃಢೀಕರಿಸಿಕೊಳ್ಳುವುದು.

ಮುಖ್ಯ ಅಭಿಯಂತರರು
ರಾಜರಾಜೇಶ್ವರಿನಗರವಲಯ
ಬೃಹತ್ ಬೆಂಗಳೂರು ಮಹಾನಗರಪಾಲಿಕೆ

ಪ್ರತಿಯನ್ನು:-

1. ಕಾರ್ಯಪಾಲಕ ಅಭಿಯಂತರರು(ರಾರಾನಗರ) ವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಯವರ ಗಮನಕ್ಕೆ ಕಳುಹಿಸಿದೆ.
3. ಕಛೇರಿ ಕಡತಕ್ಕೆ.

Scanned with CamScanner